# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 3(83) |
| ಸದಸ್ಯರ ಹೆಸರು | ಶ್ರೀ ಅರವಿಂದ ಕುಮಾರ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | 13/02/2023 |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಜೀವನೋಪಾಯ ಮತ್ತು ಉದ್ಯಮಶೀಲತೆ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬೀದರ್ ನಗರದಲ್ಲಿರುವ ಸರ್ಕಾರಿ ಇಂಜಿನಿಯರಿಂಗ್ ಮಹಾವಿದ್ಯಾಲಯದ ಕಟ್ಟಡ ಕಾಮಗಾರಿ ಮುಗಿದು ಇಲಾಖೆಗೆ ಹಸ್ತಾಂತರ ಮಾಡಲಾಗಿದೆಯೇ ; | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಬೀದರ್ ಸಂಸ್ಥೆಯ ಕಟ್ಟಡ ಕಾಮಗಾರಿಯಲ್ಲಿ ಫೇಸ್-1 ಹಾಗೂ ಫೇಸ್-2 ಕಾಮಗಾರಿಗಳಿದ್ದು, ಫೇಸ್-1 ರಲ್ಲಿ ನೆಲಮಹಡಿ ಮತ್ತು ಮೊದಲನೇ ಮಹಡಿಯ ಕಾಮಗಾರಿ ಒಳಗೊಂಡಿದ್ದು, ಪೂರ್ಣಗೊಂಡು, ಹಸ್ತಾಂತರಗೊಂಡಿರುತ್ತದೆ.<br><br>ಫೇಸ್-2ರಲ್ಲಿ ಎರಡನೇ ಮತ್ತು ಮೂರನೇ ಮಹಡಿಯ ನಿರ್ಮಾಣ ಕಾಮಗಾರಿಯು ಒಳಗೊಂಡಿದ್ದು, ಕಾಮಗಾರಿಯು ಅಂತಿಮ ಹಂತದಲ್ಲಿದ್ದು, ಸದ್ಯದಲ್ಲಿಯೇ ಸದರಿ ಕಾಮಗಾರಿಯನ್ನು ಪೂರ್ಣಗೊಳಿಸಿ ಹಸ್ತಾಂತರಿಸಿಕೊಳ್ಳಲಾಗುವುದು. |
| (ಆ) | ಹಸ್ತಾಂತರವಾಗಿದ್ದಲ್ಲಿ ಈವರೆವಿಗೆ ಪ್ರಾರಂಭ ಮಾಡದಿರಲು ಕಾರಣವೇನು;<br>ಹಸ್ತಾಂತರವಾಗದಿದ್ದಲ್ಲಿ ಕಾರಣವೇನು; | ಫೇಸ್-1 ಕಟ್ಟಡ ಕಾಮಗಾರಿ ಪೂರ್ಣಗೊಂಡು ಹಸ್ತಾಂತರಗೊಂಡಿದ್ದು, 2022-23ನೇ ಸಾಲಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ (ಕೆ.ಇ.ಎ) ವತಿಯಿಂದ ಪ್ರವೇಶ ಪ್ರಕ್ರಿಯೆಯು ಪೂರ್ಣಗೊಂಡಿದ್ದು, ಪ್ರಸ್ತುತ ಪ್ರಥಮ ವರ್ಷದ ತರಗತಿಗಳನ್ನು ನಡೆಸಲಾಗುತ್ತಿದೆ. |
| (ಇ) | ಈ ಮಹಾವಿದ್ಯಾಲಯಕ್ಕೆ ಸಿಬ್ಬಂದಿಗಳ (ಶಿಕ್ಷಕರ ಹಾಗೂ ಶಿಕ್ಷಕೇತರರನ್ನು) ನೇಮಕ ಮಾಡಿಕೊಳ್ಳಲಾಗಿದೆಯೇ ಮಾಡಿಕೊಂಡಿದ್ದಲ್ಲಿ ಎಷ್ಟು ಸಿಬ್ಬಂದಿಗಳನ್ನು ಮಾಡಿಕೊಳ್ಳಲಾಗಿದೆ; ನೇಮಕ ಮಾಡಿಕೊಳ್ಳದಿದ್ದಲ್ಲಿ ಯಾವಾಗ ನೇಮಕ ಮಾಡಿಕೊಳ್ಳಲಾಗುವುದು; | ಸದರಿ ಸಂಸ್ಥೆಗೆ ಬೋಧಕ ಮತ್ತು ಬೋಧಕೇತರ ಹುದ್ದೆಗಳು ಸೃಜಿಸುವ ಪ್ರಕ್ರಿಯೆ ಚಾಲ್ತಿಯಲ್ಲಿರುವುದರಿಂದ, ಪ್ರಸ್ತುತ ವಿದ್ಯಾರ್ಥಿಗಳ ಶೈಕ್ಷಣಿಕ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ನಡೆಸಲು 07 ಅರೆಕಾಲಿಕ ಅತಿಥಿ ಉಪನ್ಯಾಸಕರುಗಳನ್ನು ಹಾಗೂ ಹೊರಗುತ್ತಿಗೆ ಮೇರೆಗೆ 03 ಗ್ರೂಪ್-ಡಿ ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳಲಾಗಿರುತ್ತದೆ. ಅಲ್ಲದೇ ಒಬ್ಬರು ಪ್ರಾಂಶುಪಾಲರು ಹಾಗೂ 02 ಕಛೇರಿ ಸಿಬ್ಬಂದಿಯವರನ್ನು ಇತರೆ ಸಂಸ್ಥೆಗಳಿಂದ ನಿಯೋಜಿಸಲಾಗಿದೆ. |

| | | |
|---|---|---|
| (ಈ) | ಈ ಮಹಾವಿದ್ಯಾಲಯಕ್ಕೆ ಮಂಜೂರಾಗಿರುವ ಹುದ್ದೆಗಳೆಷ್ಟು; ಯಾವುವು; (ಹುದ್ದೆವಾರು ವಿವರ ನೀಡುವುದು) | ಸದರಿ ಸಂಸ್ಥೆಗೆ ಭೋಧಕ ಮತ್ತು ಬೋಧಕೇತರ ಹುದ್ದೆಗಳ ಸೃಜನೆ ಬಗ್ಗೆ ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದೆ. |
| (ಉ) | ಕಟ್ಟಡ ಹಸ್ತಾಂತರವಾಗಿದ್ದಲ್ಲಿ ಯಾವ ಶೈಕ್ಷಣಿಕ ವರ್ಷದಿಂದ ಯಾವ ತರಗತಿಗಳನ್ನು ಪ್ರಾರಂಭ ಮಾಡಲಾಗುವುದು? | ಬೀದರ್ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿ ಫೇಸ್-1 ಕಟ್ಟಡ ಕಾಮಗಾರಿ ಪೂರ್ಣಗೊಂಡು ಹಸ್ತಾಂತರಗೊಂಡಿದ್ದು, 2022-23ನೇ ಶೈಕ್ಷಣಿಕ ಸಾಲಿನಿಂದ Computer Science and Engineering ಮತ್ತು Artificial Intelligence & Data Science ವಿಭಾಗಗಳನ್ನು ತಲಾ 60 ಪ್ರವೇಶಾತಿಯೊಂದಿಗೆ ಪ್ರಾರಂಭಿಸುವ ಸಂಬಂಧ ನಿರಾಕ್ಷೇಪಣಾ ಪತ್ರವನ್ನು ನೀಡಲಾಗಿದೆ.<br><br>ಎ.ಐ.ಸಿ.ಟಿ.ಇ, ನವದೆಹಲಿ ಇವರಿಂದ LOA (Letter of Approval) ಕೂಡ ಪಡೆಯಲಾಗಿದ್ದು, ಈಗಾಗಲೇ ಸದರಿ ಸಂಸ್ಥೆಯಲ್ಲಿ ಮಂಜೂರಾಗಿರುವ ಕೋರ್ಸ್‌ಗಳಿಗೆ 2022-23ನೇ ಸಾಲಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ (ಕೆ.ಇ.ಎ) ವತಿಯಿಂದ ಪ್ರವೇಶಾತಿ ಪ್ರಕ್ರಿಯೆಯು ಪೂರ್ಣಗೊಂಡಿದ್ದು, ಪ್ರಸ್ತುತ ಪ್ರಥಮ ವರ್ಷದ ತರಗತಿಗಳು ಪ್ರಾರಂಭಗೊಂಡಿರುತ್ತವೆ. |

ಸಂಖ್ಯೆ: ಇಡಿ 19 ಹೆಚ್‌ಪಿಟಿ 2023)

(ಡಾ: ಅಶ್ವಥ್ ನಾರಾಯಣ ಸಿ.ಎನ್)
ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು
ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು
ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ,
ಜೀವನೋಪಾಯ ಮತ್ತು ಉದ್ಯಮಶೀಲತೆ ಸಚಿವರು.